ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 13–08–2021

## ಮಾಧ್ಯಮ ಆಹ್ವಾನ
## Media Invitation

**1. 75ನೇ ಸ್ವಾತಂತ್ರ್ಯ ಅಮೃತ ಮಹೋತ್ಸವ ಅಂಗವಾಗಿ ಐಕ್ಯತೆ ಮತ್ತು ದೈಹಿಕ ಸದೃಢತೆಗಾಗಿ ಸ್ವಾತಂತ್ರತೆಯ ಓಟ ಕಾರ್ಯಕ್ರಮ:**

ಮುಖ್ಯ ಅತಿಥಿಗಳು:
ಅರಗ ಜ್ಞಾನೇಂದ್ರ
ಗೃಹ ಸಚಿವರು, ಕರ್ನಾಟಕ ಸರ್ಕಾರ.

ಅಧ್ಯಕ್ಷತೆ:
ಪ್ರವೀಣ್ ಸೂದ್, ಐಪಿಎಸ್
ಮಹಾನಿರ್ದೇಶಕರು ಮತ್ತು ಪೊಲೀಸ್ ಮಹಾನಿರೀಕ್ಷಕರು, ಕರ್ನಾಟಕ ರಾಜ್ಯ, ಬೆಂಗಳೂರು.

ದಿನಾಂಕ: 14–08–2021, ಶನಿವಾರ, ಸಮಯ: ಬೆಳಿಗ್ಗೆ 07.15 ಗಂಟೆಗೆ
ಸ್ಥಳ: ಶ್ರೀ ಕಂಠೀರವ ಕ್ರೀಡಾಂಗಣ, ಸಂಪಂಗಿರಾಮನಗರ, ಬೆಂಗಳೂರು–560027.

**2. ಧ್ವಜಾರೋಹಣಾ ಕಾರ್ಯಕ್ರಮ:**

ಬಸವರಾಜ ಹೊರಟ್ಟಿ
ವಿಧಾನಪರಿಷತ್ ಸಭಾಪತಿಗಳು, ಕರ್ನಾಟಕ ಸರ್ಕಾರ.

ವಿಶ್ವೇಶ್ವರ ಹೆಗಡೆ, ಕಾಗೇರಿ
ವಿಧಾನಸಭೆ ಸಭಾಧ್ಯಕ್ಷರು, ಕರ್ನಾಟಕ ಸರ್ಕಾರ.

ದಿನಾಂಕ: 15–08–2021, ಭಾನುವಾರ, ಸಮಯ: ಬೆಳಿಗ್ಗೆ 9.00 ಗಂಟೆಗೆ
ಸ್ಥಳ: ವಿಧಾನಸೌಧದ ಪೂರ್ವ ಭಾಗದ ಭವ್ಯ ಮೆಟ್ಟಿಲುಗಳ ಮುಂಭಾಗ, ವಿಧಾನಸೌಧ, ಬೆಂಗಳೂರು.

**3. "Independence Day" Programme**

**Hon'ble Shri Justice Abhay Shreenivas Oka**
Chief Justice, High court of Karnataka.

Date: 15–8–2021, Sunday, Time: Morning 9.30 AM.
Place: Central Portico Of the high court, facing Cubbon Park, Bengaluru.

# ಪತ್ರಿಕಾ ಪ್ರಕಟಣೆ

**PRESS RELEASE**

## ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿಗೆ ರೂ.300ಕೋಟಿ ಬಿಡುಗಡೆ : ಬಸವರಾಜ ಹೊರಟ್ಟಿ

ಬೆಂಗಳೂರು ಆಗಸ್ಟ್ 13 (ಕರ್ನಾಟಕ ವಾರ್ತೆ) :

ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿಗೆ ಪ್ರಸಕ್ತ ಸಾಲಿನಲ್ಲಿ ಹೆಚ್ಚುವರಿಯಾಗಿ ರೂ.300ಕೋಟಿಗಳನ್ನು ಬಿಡುಗಡೆ ಮಾಡಿದ್ದು, ಇದನ್ನು 2019-20ನೇ ಸಾಲಿನ ಬಿಡುಗಡೆಗೆ ಬಾಕಿಯಿರುವ ರೂ. 300 ಕೋಟಿಗಳಿಗೆ ಹೊಂದಾಣಿಕೆ ಮಾಡಿಕೊಳ್ಳಲಾಗುವುದು ಎಂದು ವಿಧಾನಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಅವರು ತಿಳಿಸಿದರು.

ಇಂದು ವಿಧಾನಸೌಧದಲ್ಲಿ ಹಮ್ಮಿಕೊಳ್ಳಲಾಗಿದ್ದ ಸ್ಥಳೀಯ ಶಾಸಕರ ಪ್ರದೇಶಾಭಿವೃದ್ಧಿ ಅನುದಾನ ಬಿಡುಗಡೆ ಸಂಬಂಧ ಕರೆದಿದ್ದ ಪತ್ರಿಕಾಗೋಷ್ಠಿಯನ್ನು ಉದ್ದೇಶಿಸಿ ಮಾತನಾಡಿದ ಅವರು, 2021-22ನೇ ಸಾಲಿಗೆ 2 ಕೋಟಿ ರೂಗಳಿಗೆ ಕ್ರಿಯಾ ಯೋಜನೆ ತಯಾರಿಸಲು ಅನುಮತಿ ನೀಡಿದೆ ಎಂದರು.

ಕೆಎಲ್ಎಲ್ಎಡಿಎಸ್ ಮಾರ್ಗಸೂಚಿಗಳ ಅನ್ವಯ ಕ್ರಿಯಾ ಯೋಜನೆಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಅಂತಿಮಗೊಳಿಸಲು ಸೂಚಿಸಿದ್ದು, ಕಾಮಗಾರಿಗಳ ಪ್ರಗತಿಗೆ ಅನುಗುಣವಾಗಿ ಸರ್ಕಾರದಿಂದ ಬಿಡುಗಡೆಯಾಗಿರುವ – ಬಿಡುಗಡೆಯಾಗುವ ಅನುದಾನದಲ್ಲಿ ಭರಿಸಲಾಗುವುದು ಎಂದು ತಿಳಿಸಿದರು.

2018-19 ನೇ ಸಾಲಿಗೆ ಸಂಬಂಧಿಸಿದಂತೆ ಬಾಕಿ ಇರುವ 127.69 ಕೋಟಿ ರೂಗಳನ್ನು ಬಿಡುಗಡೆಗೊಳಿಸಲು ಪ್ರಸಕ್ತ ಲಭ್ಯವಿರುವ ಅನುದಾನ ಪೂರ್ಣವಾಗಿ ವೆಚ್ಚವಾದ ನಂತರ ಪ್ರಸ್ತಾವನೆ ಸಲ್ಲಿಸಲಾಗುವುದು. ಯೋಜನಾ ಇಲಾಖೆಯು ಅನುದಾನವನ್ನು ಕ್ಷೇತ್ರವಾರು ಬಿಡುಗಡೆ ಮಾಡುವ ಬದಲಾಗಿ ಜಿಲ್ಲಾವಾರು ಬಿಡುಗಡೆ ಮಾಡಲು ನಿರ್ಣಯಿಸಲಾಗಿದೆ ಎಂದರು.

ಎರಡು ವರ್ಷಕ್ಕಿಂತ ಹೆಚ್ಚಿನ ಅವಧಿಗೆ ಉಳಿಕೆಯಾದ ಅನುದಾನವನ್ನು ರಾಜ್ಯ ಮಟ್ಟದ ಕೇಂದ್ರೀಕೃತ ಬ್ಯಾಂಕ್ ಖಾತೆಗೆ ಜಮೆಗೊಳಿಸಲಾಗುವುದು. ಶಾಸಕರು ಕಾಮಗಾರಿಗಳನ್ನು ನೀಡಿದ ನಂತರ ಅದು ವಿಳಂಬವಾದರೆ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಶಿಸ್ತು ಕ್ರಮಕೈಗೊಳ್ಳಲಾಗುವುದು. ಶಾಸಕರ ಅನುದಾನ ಬಿಡುಗಡೆಯಲ್ಲಿ ಅಡೆತಡೆಯಾಗದಂತೆ ಮಾರ್ಗಸೂಚಿ ಹೊರಡಿಸಲಾಗುವುದು ಎಂದು ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ವಿಧಾನಪರಿಷತ್ತಿನ ಸದಸ್ಯರಾದ ಕೆ.ಸಿ.ಕೊಂಡಯ್ಯ, ಎಸ್.ರವಿ, ಅಪ್ಪಾಜಿಗೌಡ, ಹನುಮಂತ ನಿರಾಣಿ ಉಪಸ್ಥಿತರಿದ್ದರು.

## ವಿಶ್ವ ಆನೆ ದಿನಾಚರಣೆ ಅಂಗವಾಗಿ "ಮೃಗಾಲಯಕ್ಕೆ ಶ್ರಮದಾನ" ಕಾರ್ಯಕ್ರಮ ಪ್ರಾರಂಭ

ಬೆಂಗಳೂರು ಆಗಸ್ಟ್ 13 (ಕರ್ನಾಟಕ ವಾರ್ತೆ) :

ಅಳಿವಿನಂಚಿನಲ್ಲಿರುವ ಆನೆಗಳ ಬಗ್ಗೆ ಜಾಗೃತಿ ಮೂಡಿಸಲು ಮತ್ತು ಸಂರಕ್ಷಿಸಲು ಪ್ರತಿ ವರ್ಷ ಆಗಸ್ಟ್ 12 ರಂದು "ವಿಶ್ವ ಆನೆ ದಿನಾಚರಣೆ" ಅನ್ನು ಆಚರಿಸಲಾಗುತ್ತದೆ. ಅದರಂತೆ ಬನ್ನೇರುಘಟ್ಟ ಜೈವಿಕ ಉದ್ಯಾನವನದಲ್ಲಿ ವಿವಿಧ ಕಾರ್ಯಕ್ರಮಗಳೊಂದಿಗೆ ವಿಶ್ವ ಆನೆ ದಿನಾಚರಣೆಯನ್ನು ಆಚರಿಸಲಾಯಿತು. ಈ ಸಂದರ್ಭದಲ್ಲಿ ರೀಟಾ ಎಂಬ ಹೆಣ್ಣಾನೆಯನ್ನು ದುಬೈನಲ್ಲಿ ನೆಲೆಸಿರುವ ಅಮಿತ್ ನಾರಂಗ್ ಎಂಬವರು ದತ್ತು ಪಡೆದಿರುತ್ತಾರೆ.

ವಿಶ್ವ ಆನೆ ದಿನಾಚರಣೆ ಅಂಗವಾಗಿ **"ಮೃಗಾಲಯಕ್ಕೆ ಶ್ರಮದಾನ"** ಎಂಬ ಕಾರ್ಯಕ್ರಮವನ್ನು ಪ್ರಾರಂಭಿಸಿದ್ದು, ಇದರಲ್ಲಿ ನಾಗರಿಕರು ಮತ್ತು ವನ್ಯಜೀವಿ ಉತ್ಸಾಹಿಗಳು ಮೇವು ಕೊಯ್ಲಿನ ರೂಪದಲ್ಲಿ ತಮ್ಮ ಸೇವೆಯನ್ನು ಒದಗಿಸುವುದರ ಮೂಲಕ ಆಚರಣೆಯನ್ನು ಪ್ರಾರಂಭಿಸಲಾಯಿತು. ಕಟಾವು ಮಾಡಿದ ಮೇವನ್ನು ಮಾವುತರು ಆನೆಗಳಿಗೆ ನೀಡಿದರು.

ಇದಲ್ಲದೆ, ಆನೆಗಳಿಗೆ ನೈಸರ್ಗಿಕ ವರ್ತನೆಯನ್ನು ಉತ್ತೇಜಿಸುವ ಸಲುವಾಗಿ ಹಸಿರು ರೆಂಬೆ ಕೊಂಬೆಗಳೊಂದಿಗೆ ಹಣ್ಣು-ಹಂಪಲು, ತರಕಾರಿಗಳ ಪುಷ್ಟೀಕರಣವನ್ನು ನೀಡಲಾಯಿತು. ಈ ಆಹಾರ ಸಾಮಗ್ರಿಗಳನ್ನು ಕೊಳವೆಯಲ್ಲಿ ಜೋಡಿಸಿ ಆನೆಗಳ ಮುಂದೆ ಇಡಲಾಗಿ, ಅವು ಸ್ವಾಭಾವಿಕವಾಗಿ ಕಾಡಿನಲ್ಲಿ ತಮ್ಮ ಸೊಂಡಿಲಿನ ಮೂಲಕ ಪಡೆಯುವಂತೆ ಇಲ್ಲಿಯೂ ಸಹ ನೈಸರ್ಗಿಕ ರೀತಿಯಲ್ಲಿ ಪಡೆದುಕೊಂಡವು.

ಎಸ್ಒಎಸ್ ಚಿಲ್ಡ್ರನ್ಸ್ ವಿಲೇಜನ 55 ವಿದ್ಯಾರ್ಥಿಗಳು ಈ ಕಾರ್ಯಕ್ರಮದಲ್ಲಿ ಆಸಕ್ತಿಯಿಂದ ಹಾಗೂ ಕುತೂಹಲಕಾರಿಯಾಗಿ ಭಾಗವಹಿಸಿದ್ದು, ಇವರಿಗೆ ಬನ್ನೇರುಘಟ್ಟದಲ್ಲಿ ಆನೆಗಳ ನಿರ್ವಹಣೆ, ಕಾಡಿನಲ್ಲಿ ಎದುರಿಸುತ್ತಿರುವ ತೊಂದರೆಗಳು ಮತ್ತು ಅಳಿವಿನಂಚಿನಲ್ಲಿರುವ ಆನೆಗಳನ್ನು ಸಂರಕ್ಷಿಸುವ ಬಗ್ಗೆ ಅರಿವು ಮೂಡಿಸಲಾಯಿತು. ನಂತರ ವಿದ್ಯಾರ್ಥಿಗಳು ಹಾಗೂ ಸಂದರ್ಶಕರು ವನ್ಯಜೀವಿ ಪ್ರತಿಜ್ಞೆಯನ್ನು ಸ್ವೀಕರಿಸಿದರು. ಮತ್ತು ಆನೆ ಮಾವುತ ಕುಂಟುಂಬದವರಿಂದ ಮಾಡಲ್ಪಟ್ಟ **"ಎಲಿಫೆಂಟ್ ಫ್ರೆಂಡ್‌ಶಿಪ್ ಬ್ಯಾಂಡ್"** ನ್ನು ಸಂದರ್ಶಕರಿಗೆ ಹಾಗೂ ವಿದ್ಯಾರ್ಥಿಗಳಿಗೆ ಕಟ್ಟಿದರು.

ಹಿರಿಯ ಜೇನು ಕುರುಬ ಮಾವುತರಾದ ಮೋಟಣ್ಣ ಇವರು ಆನೆ ಮಾವುತ ಕುಂಟುಂಬದವರಿಂದ ಮಾಡಲ್ಪಟ್ಟ ವಿಶಿಷ್ಟ ರೀತಿಯ ಆನೆ ಪದಕದ ಹಾರವನ್ನು ಇತರೆ ಮಾವುತ, ಕಾವಾಡಿ ಮತ್ತು ಅವರ ಮಕ್ಕಳಿಗೆ ನೀಡಿ, ಆನೆಗಳನ್ನು ನೋಡಿಕೊಳ್ಳುವ ಭರವಸೆಯ ಜೊತೆಗೆ ಕೌಶಲ್ಯವನ್ನು ಅವರಿಗೆ ತಿಳಿಸಿ ಮಾದರಿಯಾದರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# World Elephant Day was celebrated on 12th August to create awareness and to conserve these endangered species.

Bengaluru, August 13 (Karnataka Information):

On this occasion, Elephant Rita was adopted by Amit Narang from Dubai through online mode .

The celebrations commenced with citizens and wildlife enthusiasts providing their services to the zoo in the form of fodder harvesting through Mrugalayakke Shramadhana Donation of Services at Zoo. The harvested fodder was fed to the elephants by the mahouts.

Further, the elephants received enrichment of various fruits and vegetables along with browse which were provided in a way which encourages their browsing behavior. Treats were also placed in a pipe, where the elephants had to retrieve it using their trunk.

55 students from SOS Children's village took part in the awareness creation session along with visitors to learn about these gentle giants, their management at BBP, threats they face in the wild and need to conserve these endangered species. Post learning about elephants, visitors took the wildlife pledge and a Elephant Friendship Band, which was made by elephant mahouts families, were tied to the visitors by them.

Senior Jenu Kuruba mahout, Motanna, provided the mahouts, kavadis and their children with a elephant necklet, which was also created by the family of the mahouts, as a promise to take care of the elephants as well as to pass on the skills to their children.

## ಪ್ರಾಣಿಗಳ ದತ್ತು ಸ್ವೀಕಾರ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ) :

ಮೈಸೂರು ಶ್ರೀ ಚಾಮರಾಜೇಂದ್ರ ಮೃಗಾಲಯದ ಪ್ರಾಣಿಗಳ ದತ್ತು ಸ್ವೀಕಾರ ಯೋಜನೆಯಡಿ ಮೃಗಾಲಯದ ಪ್ರಾಣಿ ಪಕ್ಷಿಗಳನ್ನು ನಿಗಧಿಪಡಿಸಿರುವ ಶುಲ್ಕವನ್ನು ಪಾವತಿಸಿ "ಗ್ರೇಟ್ ಇಂಡಿಯನ್ ಹಾರ್ನ್‌ಬಿಲ್" ಅನ್ನು ಬೆಂಗಳೂರಿನ ಯುವನ್ ವಿ, "ಲೆಪರ್ಡ್ ಕ್ಯಾಟ್"ನ್ನು ಮೋನ ಡೋನ ರಾಜೇಶ್, "ಫ್ಲೆಮಿಂಗೊ" ಅನ್ನು ಸತ್ಯನಾರಾಯಣ ತಾಳ್ಯ, ಸರ್ಥ ಅಸೋಸಿಯೇಟ್ಸ್ ಆರ್ಕಿಟೆಕ್ಟ್ಸ್ ಮತ್ತು ಇಂಟೀರಿಯರ್ ಡಿಸೈನರ್ಸ್, "ಕಾಮನ್ ಪೀಪೌಲ್"ನ್ನು ಚಾರ್ವಿ ವಿನ್ಯ, "ಲೆಪರ್ಡ್ ಕ್ಯಾಟ್" ಅನ್ನು ನವೀನ್ ಅಶ್ವಥ್, "ಲೆಪರ್ಡ್ ಕ್ಯಾಟ್" ಅನ್ನು ಮೈಸೂರಿನ ಮಾಸ್ಟರ್ ಅರ್ನವ್ ಎನ್ ಹೆಗ್ಗೆರೆ, "ರಸ್ಟಿ ಸ್ಪಾಟೆಡ್ ಕ್ಯಾಟ್" ಅನ್ನು ಆಶಾ D/o ದೇವರಾಜಪ್ಪ ಕೊಹಾಲ, ಹೆಚ್.ಡಿ.ಕೋಟೆ, "ಕಾಮನ್ ಆಸ್ಟ್ರಿಚ್, ಡಾರ್ವಿನ್ಸ್ ರಿಯ ಮತ್ತು ಕ್ಯಾಸೊವರಿ"ಅನ್ನು ಸಿ.ಚಂದ್ರಕಲ ಅವರು ದತ್ತು ಪಡೆದಿರುವುದಕ್ಕೆ ಶ್ರೀಚಾಮರಾಜೇಂದ್ರ ಮೃಗಾಲಯ, ಮೈಸೂರು ಅಭಿನಂದನೆಗಳನ್ನು ಸಲ್ಲಿಸಿದೆ ಎಂದು ಪ್ರಕಟಣೆ ತಿಳಿಸಿದೆ.

## ವೀಕ್ ಎಂಡ್ ಕರ್ಫ್ಯೂ ಹಿನ್ನೆಲೆ ಆಗಸ್ಟ್ 14 & 15 ರಂದು ಮೃಗಾಲಯ ವೀಕ್ಷಣೆಗೆ ಅವಕಾಶವಿಲ್ಲ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ) :

ಕೋವಿಡ್-19ರ ವೀಕ್ ಎಂಡ್ ಕರ್ಫ್ಯೂ ಹಿನ್ನೆಲೆಯಲ್ಲಿ ಶ್ರೀ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿಕೆರೆ ಪ್ರಕೃತಿ ಉದ್ಯಾನವನವನ್ನು ಆಗಸ್ಟ್ 14 ಶನಿವಾರ ಮತ್ತು 15 ಭಾನುವಾರ ದಂದು ಸಾರ್ವಜನಿಕರ ವೀಕ್ಷಣೆಗೆ ನಿರ್ಬಂಧಗೊಳಿಸಿ, ಭಾನುವಾರದ ಬದಲಿಗೆ ಆಗಸ್ಟ್ 17 ಮಂಗಳವಾರದಂದು ವೀಕ್ಷಣೆಗೆ ತೆರೆಯಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಟೆಕ್ಸ್‌ಟೈಲ್ಸ್ ಟೆಕ್ನಾಲಜಿ ಡಿಪ್ಲೋಮಾ ಕೋರ್ಸ್ ಪ್ರವೇಶ ಆರಂಭ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ) :

ಸರ್ಕಾರಿ ಜವಳಿ ತಾಂತ್ರಿಕ ಸಂಸ್ಥೆ ವತಿಯಿಂದ 2020-21ನೇ ಸಾಲಿನ ಪ್ರಥಮ ಸೆಮಿಸ್ಟರ್ ಟೆಕ್ಸ್‌ಟೈಲ್ಸ್ ಟೆಕ್ನಾಲಜಿ ಡಿಪ್ಲೋಮಾ ಕೋರ್ಸಿಗೆ ಆಗಸ್ಟ್ 12 ರಿಂದ ಪ್ರವೇಶ ಪ್ರಕ್ರಿಯೆ ಪ್ರಾರಂಭವಾಗಿದೆ.

ಪ್ರವೇಶಾತಿಗಾಗಿ ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಶೇಕಡ. 35% ಅಂಕಗಳೊಂದಿಗೆ ಉತ್ತೀರ್ಣರಾಗಿರಬೇಕು. ಅಥವಾ ಐ.ಟಿ.ಐ/ಪಿಯುಸಿಯಲ್ಲಿ ಉತ್ತೀರ್ಣ/ ಅನುತ್ತೀರ್ಣವಾಗಿರಬಹುದು.

ವಿದ್ಯಾರ್ಥಿಗಳು ಪ್ರವೇಶಾತಿಗೆ ಸಲ್ಲಿಸಬೇಕಾದ ದಾಖಲಾತಿಗಳು ಎಸ್‌ಎಸ್‌ಎಲ್‌ಸಿ ಮಾರ್ಕ್ಸ್ ಕಾರ್ಡ್, ಟ್ರಾನ್ಸ್‌ಫರ್ ಸರ್ಟಿಫಿಕೇಟ್, ಐದು ವರ್ಷದ ವ್ಯಾಸಂಗ ಪ್ರಮಾಣ ಪತ್ರ. ಬಿಇಒ ಅವರಿಂದ ಮೇಲುರುಜು ಮಾಡಿಸಿರಬೇಕು, ಜಾತಿ ಪ್ರಮಾಣ ಪತ್ರ ಮತ್ತು ಆದಾಯ ಪ್ರಮಾಣ ಪತ್ರ, ದೈಹಿಕ ಸದೃಢತೆ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಪಾಸಪೋರ್ಟ್ ಅಳತೆಯ 4 ಪೋಟೋಗಳ ಜೊತೆಗೆ ಅಪ್ಲಿಕೇಶನ್ ಭರ್ತಿ ಮಾಡಿ ಸಲ್ಲಿಸಬೇಕು.

ವಿದ್ಯಾರ್ಥಿಗಳು ಅಗತ್ಯ ದಾಖಲೆಗಳೊಂದಿಗೆ ನೇರವಾಗಿ ಕಾಲೇಜಿಗೆ ಬಂದು ಪ್ರವೇಶ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 9481101049, 9448705205 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## 28 ನೇ ಮಕ್ಕಳ ವಿಜ್ಞಾನ ಸಮಾವೇಶ

## ರಾಷ್ಟ್ರಮಟ್ಟಕ್ಕೆ ಆಯ್ಕೆಯಾದ ಬಾಲವಿಜ್ಞಾನಿಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ) :

ರಾಷ್ಟ್ರೀಯ ವಿಜ್ಞಾನ ಮತ್ತು ತಂತ್ರಜ್ಞಾನ ಸಂವಹನ ಮಂಡಳಿ, ಭಾರತ ಸರ್ಕಾರ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ, ಸಾರ್ವಜನಿಕ ಶಿಕ್ಷಣ ಇಲಾಖೆ, ಕರ್ನಾಟಕ ಸರ್ಕಾರ ಸಹಯೋಗದೊಂದಿಗೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತು ರಾಜ್ಯದಲ್ಲಿ ಮಕ್ಕಳ ವಿಜ್ಞಾನ ಸಮಾವೇಶವನ್ನು ಸಂಘಟಿಸಲಾಗಿದೆ ಎಂದು ಕರ್ನಾಟಕ ರಾಜ್ಯವಿಜ್ಞಾನ ಪರಿಷತ್ತಿನ ಗೌರವ ಕಾರ್ಯದರ್ಶಿ ಸಿ.ಕೃಷ್ಣೇಗೌಡ ಅವರು ತಿಳಿಸಿದ್ದಾರೆ.

ಭವಿಷ್ಯದ ಬಾಲವಿಜ್ಞಾನಿಗಳನ್ನು ರೂಪಿಸಲು ನೆರವಾಗಿರುವ ಸಮಾವೇಶದಲ್ಲಿ ವಿದ್ಯಾರ್ಥಿಗಳು ಸಮಾವೇಶದ ಕೇಂದ್ರ ವಿಷಯ 'ಸುಸ್ಥಿರ ಜೀವನಕ್ಕಾಗಿ ವಿಜ್ಞಾನ' ಎಂಬ ವಿಷಯದಡಿ ತಮ್ಮ ಮಾರ್ಗದರ್ಶಿ ಶಿಕ್ಷಕರ ಮಾರ್ಗದರ್ಶನದಲ್ಲಿ ತಾವೇ ಸ್ವತಃ ರೂಪಿಸಿರುವ ವೈಜ್ಞಾನಿಕ ವಿಶ್ಲೇಷಣೆ / ಅವಲೋಕನದಿಂದ ಅಧ್ಯಯನ ಕೈಗೊಂಡ ಯೋಜನಾ ವರದಿಯನ್ನು ಮಂಡಿಸಬೇಕಾಗುತ್ತದೆ. ರಾಷ್ಟ್ರೀಯ ಮಕ್ಕಳ ವಿಜ್ಞಾನ ಸಮಾವೇಶದ ಮುಖ್ಯ ಉದ್ದೇಶ 10–17 ವರ್ಷ ವಯೋಮಾನದ ಮಕ್ಕಳಿಗೆ ಸೂಕ್ತ ವೇದಿಕೆಯನ್ನು ಒದಗಿಸಿಕೊಡುವುದು. ಭವಿಷ್ಯದ ಬಾಲವಿಜ್ಞಾನಿಗಳನ್ನು ರೂಪಿಸಲು ನೆರವಾಗಲು ಈ ಯೋಜನೆ ಸಹಕಾರಿಯಾಗುತ್ತದೆ.

ಈ ಸಮಾವೇಶದಲ್ಲಿ 10 ರಿಂದ 17 ವರ್ಷ ವಯೋಮಾನದ ಯಾವುದೇ ಮಾಧ್ಯಮದಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಒಂದು ತಂಡದಲ್ಲಿ ಇಬ್ಬರು ವಿದ್ಯಾರ್ಥಿಗಳು ಭಾಗವಹಿಸಬಹುದಾಗಿದೆ. ಈ ಸಮಾವೇಶದಲ್ಲಿ ಶಾಲೆ ಬಿಟ್ಟ ಮಕ್ಕಳೂ ಕೂಡ ಭಾಗವಹಿಸಲು ಅವಕಾಶವಿದೆ. ಈ ಸಮಾವೇಶವು ಜಿಲ್ಲಾಮಟ್ಟ, ರಾಜ್ಯಮಟ್ಟ ಹಾಗೂ ರಾಷ್ಟ್ರಮಟ್ಟ 03 ಹಂತದಲ್ಲಿ ಜರುಗಲಿದೆ. ಕಿರಿಯರು 10 ರಿಂದ 14 ವಯೋಮಾನದವರು ಹಾಗೂ ಹಿರಿಯರು 14 ರಿಂದ 17 ವಯೋಮಾನದವರು ಇರಬಹುದಾಗಿದೆ.

ಈ ಯೋಜನೆಗಳಲ್ಲಿ ಅತ್ಯುತ್ತಮವಾದ 10 ಯೋಜನೆಗಳನ್ನು ಪ್ರತಿ ಜಿಲ್ಲೆಯಿಂದ ರಾಜ್ಯಮಟ್ಟಕ್ಕೆ ಆಯ್ಕೆ ಮಾಡಲಾಗುವುದು. ಒಟ್ಟು 300 ಯೋಜನೆಗಳನ್ನು ರಾಜ್ಯಮಟ್ಟದಲ್ಲಿ ಆನ್‌ಲೈನ್‌ನಲ್ಲಿ ವಿದ್ಯಾರ್ಥಿಗಳು ಯೋಜನೆಯನ್ನು ಮಂಡಿಸಿರುತ್ತಾರೆ. ಇದರಲ್ಲಿ ಅತ್ಯುತ್ತಮವಾದ 30 ಯೋಜನೆಗಳನ್ನು ಮೌಲ್ಯಮಾಪಕರು ಆಯ್ಕೆ ಮಾಡಿ ರಾಷ್ಟ್ರ ಮಟ್ಟದ ಸ್ಪರ್ಧೆಗೆ ಕಳುಹಿಸಲಾಗುವುದು.

ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುವ 30 ಬಾಲವಿಜ್ಞಾನಿಗಳಿಗೆ ಆಗಸ್ಟ್ 17 ರಂದು ಬೆಳಿಗ್ಗೆ 10.30 ಗಂಟೆಗೆ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಪ್ರೊ. ಎಂ.ಎ. ಸೇತುರಾವ್ ಸಭಾಂಗಣದಲ್ಲಿ ಜರುಗಲಿರುವ ಕಾರ್ಯಕ್ರಮದಲ್ಲಿ ಆದಿ ಚುಂಚನಗಿರಿ ಸಂಸ್ಥಾನಮಠದ ಪರಮ ಪೂಜ್ಯ ಜಗದ್ಗುರು ಶ್ರೀ ಡಾ.ನಿರ್ಮಲಾನಂದ ಮಹಾ ಸ್ವಾಮೀಜಿಯವರು ಕಾರ್ಯಕ್ರಮದಲ್ಲಿ ಬಾಲವಿಜ್ಞಾನಿಗಳಿಗೆ ಆಶೀರ್ವಚನ ನೀಡಲಿದ್ದಾರೆ. ಉನ್ನತ ಶಿಕ್ಷಣ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆಯ ಸಚಿವರಾದ ಡಾ.ಅಶ್ವತ್ಥನಾರಾಯಣ ಅವರು ಪ್ರಶಸ್ತಿ ಪ್ರಧಾನ ಮಾಡುವರು.

ಡಿ.ಆರ್.ಡಿ.ಓ ವಿಶ್ರಾಂತ ಮುಖ್ಯಸ್ಥರು ಹಾಗೂ ಹಿರಿಯ ವಿಜ್ಞಾನಿಗಳು ಇವರು ಮೂಲ ವಿಜ್ಞಾನದ ಕುರಿತು ಉಪನ್ಯಾಸ ನೀಡುವರು. ವಿಧಾನ ಪರಿಷತ್ತಿನ ಶಾಸಕರು ಹಾಗೂ ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಮಾಜಿ ಅಧ್ಯಕ್ಷರಾದ ಎಸ್.ವಿ.ಸಂಕನೂರ ಕೆ-ಸ್ಟೆಪ್ಸ್‌ನ ವ್ಯವಸ್ಥಾಪಕ ನಿರ್ದೇಶಕರಾದ ಎ.ಬಿ.ಬಸವರಾಜು, ಅದಮ್ಯ ಚೇತನದ ಮುಖ್ಯಸ್ಥರಾದ ಶ್ರೀಮತಿ ತೇಜಸ್ವಿನಿ ಅನಂತಕುಮಾರ್, ಅಧ್ಯಕ್ಷರು ಗಿರೀಶ ಕಡ್ಲೇವಾಡ, ಮಕ್ಕಳ ವಿಜ್ಞಾನ ಸಮಾವೇಶ 2020ರ ರಾಜ್ಯ ಶೈಕ್ಷಣಿಕ ಸಂಯೋಜಕರು, ಕರ್ನಾಟಕ ರಾಜ್ಯ ವಿಜ್ಞಾನ ಪರಿಷತ್ತಿನ ಕಾರ್ಯಕಾರಿ ಸಮಿತಿ ಸದಸ್ಯರು ಸಭೆಯಲ್ಲಿ ಭಾಗವಹಿಸಲಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಗುಣಮಟ್ಟವಲ್ಲದ ಔಷಧಿಗಳ ಬಳಕೆ ನಿಷೇಧ

ಬೆಂಗಳೂರು, ಆಗಸ್ಟ್ 13, (ಕರ್ನಾಟಕ ವಾರ್ತೆ) :

ಕರ್ನಾಟಕ ಔಷಧ ಪರೀಕ್ಷಾ ಪ್ರಯೋಗಾಲಯದ ಸರ್ಕಾರಿ ವಿಶ್ಲೇಷಕರು ಎನ್ರೋಪ್ಲಾಕ್ಸಸಿನ್ ಇನ್‌ಜೆಕ್ಷನ್ ಐ.ಪಿ 10% (ವೆಟ್), ಐಬುಪ್ರೋಫೇನ್ ಅಂಡ್ ಪ್ಯಾರಸೆಟಮೋಲ್ ಟ್ಯಾಬ್ಲೆಟ್ಸ್ ಐಪಿ (ಪ್ಲೆಕ್ಸಿಬ್ 325), ಪ್ರಿಕ್ಯಾಪ್-ಎಂ (ಪ್ರಿಗಬಾಲಿನ್ ಅಂಡ್ ಮೀಥೈಲ್ಕೋಬಾಲಾಮಿನ್ ಕ್ಯಾಪ್ಸೂಲ್ಸ್ ಐಪಿ), ಜಿಂಕ್ ಸಲ್ಫೇಟ್ ಟ್ಯಾಬ್ಲೆಟ್ಸ್ 50ಎಂಜಿ, ಲಿವೋಸಿಟ್ರಿಜನ್ ಡೈಹೈಡ್ರೋಕ್ಲೋರೈಡ್ & ಮಾಂಟಿಲುಕಾಸ್ಟ್ ಟ್ಯಾಬ್ಲೆಟ್ಸ್ ಐಪಿ ಕುರಿಜನ್-ಎಂ, ಫೆನ್‌ಬೆಂಡಜೋಲ್ ಬೋಲಸ್ (ಫೆನ್ಸಿಪ್-1500), ಕಾಫ್-ಕ್ಯೂ ಟ್ಯಾಬ್ಲೆಟ್ಸ್ (ಗೂಯಫೆನೆಸಿನ್, ಬ್ರೋಮ್ಹೆಕ್ಸಿನ್ ಹೈಡ್ರೋಕ್ಲೋರೈಡ್, ಕ್ಲೋರೋಫೆನರಮಿನ್ ಮಲೇಟ್, ಫೆನೈಲ್‌ಫ್ರೈನ್ ಹೈಡ್ರೋಕ್ಲೋರೈಡ್ ಅಂಡ್ ಪ್ಯಾರಸೆಟಮೋಲ್ ಟ್ಯಾಬ್ಲೆಟ್ಸ್), ಓಫಾಕ್ಸಸಿನ್ & ಓರ್ನಿಡಜೋಲ್ ಟ್ಯಾಬ್ಲೆಟ್ಸ್ ಐಪಿ (ಲಾಕ್‌ಸ್ಫೋಕ್), ಅಮೋಕ್ಸಿಲಿನ್ & ಪೊಟಾಷಿಯಮ್ ಕ್ಲಾವುಲನೇಟ್ ಟ್ಯಾಬ್ಲೆಟ್ಸ್ ಐ.ಪಿ (ಡೇನೆಕ್ಲಾವ್ 625 ಟ್ಯಾಬ್ಲೆಟ್ಸ್), ಅಸೆಫೋರ್ಡ-ಎಂಆರ್ ಟ್ಯಾಬ್ಲೆಟ್ಸ್ (ಅಸೆಕ್ಲೋಫೆನಕ್, ಪ್ಯಾರಸೆಟಮೋಲ್ & ಕ್ಲೋರ್ಜೋಕ್ಸಜೋನ್ ಟ್ಯಾಬ್ಲೆಟ್ಸ್), ಟೆಲ್ಮಿಸ್ 40 (ಟೆಲ್‌ಮಿಸರಟನ್ ಟ್ಯಾಬ್ಲೆಟ್ಸ್ ಐಪಿ), ಪ್ಯಾಂಟೋಪ್ರಜೋಲ್ ಗ್ಯಾಸ್ಟ್ರೋ-ರಿಸಿಸ್ಟೆಂಟ್& ಡೋಮಫೆರಿಡನ್ ಪ್ರೋಲಾಂಗಡ್-ರಿಲೀಸ್ ಕ್ಯಾಪ್ಸೂಲ್ಸ್ ಐಪಿ (ಪಿ- ಜೋಲ್- ಡಿಎಸ್‌ಆರ್) ಔಷಧಿಗಳು/ಕಾಂತಿವರ್ಧಕಗಳನ್ನು ಔಷಧ ವ್ಯಾಪಾರಿಗಳು, ಸಗಟು ಔಷಧ ಮಾರಾಟಗಾರರು, ವೈದ್ಯರು, ಆಸ್ಪತ್ರೆ, ಮತ್ತು ನರ್ಸಿಂಗ್ ಹೋಂನವರು ದಾಸ್ತಾನು ಮಾಡುವುದಾಗಲೀ ಅಥವಾ ಮಾರಾಟ ಮಾಡುವುದಾಗಲೀ, ಉಪಯೋಗಿಸುವುದಾಗಲೀ ಮಾಡಬಾರದು. ಯಾರಾದರೂ ಔಷಧಿಗಳ ದಾಸ್ತಾನನ್ನು ಹೊಂದಿದ್ದಲ್ಲಿ ಕೂಡಲೇ ಸಂಬಂಧಪಟ್ಟ ಕೇತ್ರದ ಔಷಧ ಪರಿವೀಕ್ಷಕರು ಅಥವಾ ಸಹಾಯಕ ಔಷಧ ನಿಯಂತ್ರಕರ ಗಮನಕ್ಕೆ ತರಬೇಕು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

ಬೆಂಗಳೂರು, ಆಗಸ್ಟ್ 13 (ಕರ್ನಾಟಕ ವಾರ್ತೆ):

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 13.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 40 | ಉತ್ತಮ | $PM_{10}$ |

| | | | | |
|---|---|---|---|---|
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 41 | ಉತ್ತಮ | $PM_{10}$ |
| 3 | ಕವಿಕ, ಮೈಸೂರುರಸ್ತೆ | 49 | ಉತ್ತಮ | $PM_{10}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 38 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 76 | ತೃಪ್ತಿಕರ | $PM_{10}$ |
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 61 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 62 | ತೃಪ್ತಿಕರ | $PM_{10}$ |
| **(13.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 107 | ಸಾಧಾರಣ | CO |
| 9 | ಪೀಣ್ಯ | 61 | ತೃಪ್ತಿಕರ | $PM_{2.5}$ |
| 10 | ಬಿಟಿಎಂ ಲೇಔಟ್ | 59 | ತೃಪ್ತಿಕರ | $PM_{10}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 13.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 40 | Good | $PM_{10}$ |
| 2 | Jayanagar 5th Block, Shalini ground | 41 | Good | $PM_{10}$ |
| 3 | KAVIKA, Mysore Road | 49 | Good | $PM_{10}$ |

| | | | | |
|---|---|---|---|---|
| 4 | Rajeev Gandhi Institute of Chest Disease, NIMHANS, Hombegowda Nagar | 38 | Good | $PM_{10}$ |
| 5 | HSR Layout, near Central Silkboard | 76 | Satisfactory | $PM_{10}$ |
| 6 | City Railway Station, Magestic, Bengaluru | 61 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 62 | Satisfactory | $PM_{10}$ |
| **(13.8.2021 at 11.05 AM)** | | | | |
| 8 | BWSSB, Kadabesanahalli | 107 | Moderate | CO |
| 9 | Peenya | 61 | Satisfactory | $PM_{2.5}$ |
| 10 | BTM Layout | 59 | Satisfactory | $PM_{10}$ |

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |